ಕೊಳಚೆ ಪ್ರದೇಶಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು

122 (401) ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಮಹಾನಗರ ಪ್ರದೇಶ ವ್ಯಾಪ್ತಿಯಲ್ಲಿರುವ ಕೊಳಚೆ ಪ್ರದೇಶಗಳ ನಿವಾಸಿಗರಿಗೆ ಇಲಾಖೆಯವರು ಒದಗಿಸಿ ಕೊಡುತ್ತಿರುವ ಮೂಲ ಸೌಕರ್ಯಗಳೇನು ; (ವಿವರ ನೀಡುವುದು)

ಆ) ಎಷ್ಟು ಕೊಳಚೆ ಪ್ರದೇಶಗಳಿಗೆ ಮೂಲ ಸೌಕರ್ಯಗಳನ್ನು ಒದಗಿಸಲಾಗಿಲ್ಲ;

ಇ) ಶಾಂತಿನಗರ ವಿಧಾನಸಭಾ ಕ್ಷೇತ್ರದಲ್ಲಿರುವ ಕೊಳಚೆ ಪ್ರದೇಶಗಳ ಅಭಿವೃದ್ಧಿಗಾಗಿ ಸರಕಾರ ಅನುಷ್ಠಾನಗೊಳಿಸಿದ ಯೋಜನೆಗಳು ಮತ್ತು ಫಲಾನುಭವಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)?

ಶ್ರೀ ವಿ. ಸೋಮಣ್ಣ (ವಸತಿ ಸಚಿವರು):

ಅ) ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಆಯ್ದ ಕೊಳಚೆ ಪ್ರದೇಶದ ನಿವಾಸಿಗಳಿಗೆ ಮಂಡಳಿ ವತಿಯಿಂದ ಕೇಂದ್ರ ಪುರಸ್ಕೃತ JNNURM-BSUP ಯೋಜನೆಯಡಿ, ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು, ಒಳಚರಂಡಿ, ರಸ್ತೆ, ಚರಂಡಿ, ಬೀದಿ ದೀಪಗಳೊಂದಿಗೆ ಮನೆಗಳನ್ನು ನಿರ್ಮಿಸಿ ಹಂಚಿಕೆ ಮಾಡಲಾಗುತ್ತಿದೆ.

ಆ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಂಡಳಿ ವತಿಯಿಂದ ಘೋಷಿಸಿರುವ 310 ಕೊಳಚೆ ಪ್ರದೇಶಗಳ ಪೈಕಿ ಸುಮಾರು 72 ಕೊಳಚೆ ಪ್ರದೇಶಗಳಲ್ಲಿ ಮಂಡಳಿ ವತಿಯಿಂದ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುವುದಿಲ್ಲ. ಮುಂದಿನ ವರ್ಷಗಳಲ್ಲಿ ಅನುದಾನದ ಲಭ್ಯತೆ ಆಧಾರದ ಮೇರೆಗೆ ಹಾಗೂ ಸ್ಥಳೀಯ ಅವಶ್ಯಕತೆಗಳಿಗೆ ಅನುಗುಣವಾಗಿ ಯೋಜನೆಗಳನ್ನು ರೂಪಿಸಲಾಗುವುದು.

ಇ) ಶಾಂತಿನಗರ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 8 ಕೊಳಚೆ ಪ್ರದೇಶಗಳಿದ್ದು, ಈ ಪ್ರದೇಶಗಳಲ್ಲಿ 4538 ಕುಟುಂಬಗಳು ವಾಸ ಮಾಡುತ್ತಿರುವುದಾಗಿ ಅಂದಾಜಿಸಲಾಗಿದೆ. ಈ ಪೈಕಿ ಲಕ್ಷ್ಮಣ್‌ರಾವ್ ನಗರ ಕೊಳಚೆ ಪ್ರದೇಶದಲ್ಲಿ, JNNURM-BSUP ಯೋಜನೆಯಡಿ ಮೂಲಭೂತ ಸೌಲಭ್ಯಗಳೊಂದಿಗೆ 1283 ಮನೆಗಳ ನಿರ್ಮಾಣವನ್ನು ಕೈಗೆತ್ತಿಕೊಳ್ಳಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ. ಸದರಿ ಕಾಮಗಾರಿಗಳನ್ನು ಡಿಸೆಂಬರ್ 2011 ಅಂತ್ಯದೊಳಗೆ ಪೂರ್ಣಗೊಳಿಸಲು ಗುರಿ ಹೊಂದಲಾಗಿದೆ.